ದಿನಾಂಕಃ 28-10-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆ: ಎದುರುದಾರ ಪರ ವಕೀಲರಿಂದ:**

ನಾನು ನನ್ನ ಸಾಕ್ಷ್ಯ ಪ್ರಮಾಣ ಪತ್ರವನ್ನು ಹಾಜರಪಡಿಸಿದ್ದು, ಅದರಲ್ಲಿ ಬರೆದ ವಿಷಯಗಳು ಸರಿ ಇರುತ್ತವೆ. ಸದರಿ ವಿಷಯವನ್ನು ತಿಳಿದುಕೊಂಡು ನಾನು ನನ್ನ ಸಾಕ್ಷ್ಯ ಪ್ರಮಾಣ ಪತ್ರದ ಮೇಲೆ ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲ ಸಂಗತಿಗಳು ನಿಜ ಇರುತ್ತವೆ.

**ಪಾಟೀ ಸವಾಲು: ಅರ್ಜಿದಾರ ಪರ ಶ್ರೀ ಎಂಪಿಕೆ  ವಕೀಲರಿಂದ:**

ನಾನು ಒಕ್ಕಲುತನ ಕೆಲಸ ಮಾಡಿಕೊಂಡು ವಾಸ ಇರುತ್ತೇನೆ. ನನಗೆ 20 ಎಕರೆ  ಜಮೀನು ಇರುತ್ತದೆ. ಸದರಿ ಜಮೀನು ನನ್ನ ಹೆಸರಿನಲ್ಲಿ ಇರುತ್ತದೆ. ಅವುಗಳ ಸರ್ವೆ ನಂಬರ ಹೇಳಲು ಬರುವುದಿಲ್ಲ. ಆಸ್ತಿಗಳು ಮುಧೋಳ  ತಾಲೂಕಿನ ವರ್ಚಗಲ್ ಗ್ರಾಮದಲ್ಲಿ ಇರುತ್ತವೆ.  ವಾರ್ಷಿಕವಾಗಿ ಜಮೀನುಗಳಿಂದ 6 ಲಕ್ಷ ರೂಪಾಯಿ  ಆದಾಯ ಬರುತ್ತದೆ. ಜಮೀನುಗಳಲ್ಲಿ ಉಳ್ಳಾಗಡ್ಡಿ ಮತ್ತು ಸೂರ್ಯಪಾನ್ ಬೆಳೆ ಬೆಳೆಯುತ್ತೇವೆ. ಅಪಘಾತಪಡಿಸಿದ ಟ್ರ್ಯಾಕ್ಟರ ಮತ್ತು ಟ್ರೆಲರ ನನ್ನ ಹೆಸರಿನಲ್ಲಿ ಇರುತ್ತವೆ ಎಂದರೆ ಸರಿ. ಅಪಘಾತದ ದಿನದಂದು ನನ್ನ ಟ್ರ್ಯಾಕ್ಟರ ಮತ್ತು ಟ್ರೇಲರಗೆ ವಿಮೆ ಇರಲಿಲ್ಲ ಎಂದರೆ ನನಗೆ ಗೊತ್ತಿಲ್ಲ. ಆ ದಿನ ನನ್ನ ಮಗ ಈರಣ್ಣಗೌಡ ಪಾಟೀಲ ಟ್ರ್ಯಾಕ್ಟರ ಚಲಾಯಿಸುತ್ತಿದ್ದನು. ನನ್ನ ಮಗ ಅಧಿಕೃತ ಚಾಲನಾ ಪರವಾನಿಗೆ  ಹೊಂದಿರಲಿಲ್ಲ ಎಂದರೆ ಸರಿಯಲ್ಲ. ಅಪಘಾತವು ಟ್ರ್ಯಾಕ್ಟರ ಚಾಲಕನ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ಆ ಬಗ್ಗೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪೋಲಿಸರು ಟ್ರ್ಯಾಕ್ಟರ ಚಾಲಕನ ವಿರುದ್ಧ ದೋಷಾರೋಪಣ ಪತ್ರ  ಸಲ್ಲಿಸಿರುತ್ತಾರೆ ಎಂದರೆ ಸರಿ. ಸಾಕ್ಷಿ ಮುಂದುವರೆದು ಹಿಂದಿನಿಂದ ಹೊಡೆದಿರುವುದಾಗಿ ದೋಷಾರೋಪಣ ಪತ್ರ ಸಲ್ಲಿಸಿರುತ್ತಾರೆ ಎಂದು ಹೇಳುತ್ತಾರೆ. ಹಿಂದಿನಿಂದ ಬಂದು ಟ್ರ್ಯಾಕ್ಟರಗೆ ಡಿಕ್ಕಿಪಡಿಸಿರುತ್ತಾರೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಲಿಸರು ಸಲ್ಲಿಸಿದ ದೋಷಾರೋಪಣ ಪತ್ರ ಸರಿ ಇರುತ್ತದೆ. ಪ್ರತಿವಾದ ಪತ್ರ ಸಲ್ಲಿಸಲು ಮಾಹಿತಿಯನ್ನು ನಾನೇನೀಡಿರುತ್ತೇನೆ. ಟ್ರ್ಯಾಕ್ಟರ ಚಾಲಕನು ದಿನಾಂಕಃ 28-10-2023 ರಂದು ಟ್ರ್ಯಾಕ್ಟರನ್ನು ಅತೀವೇಗ ಮತ್ತು ಆಲಕ್ಷ್ಯತನದಿಂದ ಚಲಾಯಿಸಿ ಅರ್ಜಿದಾರನಿಗೆ ಡಿಕ್ಕಿಪಡಿಸಿರುತ್ತಾನೆ ಎಂದರೆ ಸರಿಯಲ್ಲ. ಆಟ್ರ್ಯಾಕ್ಟರ ನಿಧಾನವಾಗಿ ಚಲಾಯಿಸಿರುತ್ತಾನೆ ಎಂದು ಸುಳ್ಳು

ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ಅರ್ಜಿದಾರನ ಕಾಲು ಮುರಿದಿದ್ದು, ನಂತರ ಸಾಯಿ ಆಸ್ಪತ್ರೆ ಮುಧೋಳದಲ್ಲಿ ಚಿಕಿತ್ಸೆಗಾಗಿ ದಾಖಲು ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಅರ್ಜಿದಾರನು ಮೋಟರ ಸೈಕಲ್ ಅತೀವೇಗ ಮತ್ತು ಆಲಕ್ಷ್ಯತನದಿಂದ ಚಲಾಯಿಸಿಕೊಂಡು ಬಂದು ಟ್ರ್ಯಾಕ್ಟರಗೆ ಡಿಕ್ಕಿಪಡಿಸಿರುತ್ತಾನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಟ್ರ್ಯಾಕ್ಟರ ಚಾಲಕನ ತಪ್ಪಿನಿಂದ ಅಪಘಾತವಾಗಿರುವುದಿಲ್ಲ, ಅರ್ಜಿದಾರನ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರನಿಗೆ ಅಪಘಾತದಲ್ಲಿ ಯಾವುದೇ ಗಾಯಗಳಾಗಿರುವುದಿಲ್ಲ ಮತ್ತು ಮೋಟರ ಸೈಕಲ್ ಯಾವುದೇ ಜಖಂಗೊಂಡಿಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತಕ್ಕೆ ಅರ್ಜಿದಾರನೆ ಹೊಣೆಗಾರ, ಕಾರಣ ನಾನು ಪರಿಹಾರ ಕೊಡಲು ಬಾಧ್ಯಸ್ಥನಲ್ಲ ಎಂದರೆ ಸರಿಯಲ್ಲ. ಅರ್ಜಿದಾರನಿಗೆ ಪರಿಹಾರ ಕೊಡಬೇಕಾಗುತ್ತದೆ ಎಂಬ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ: ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಅಂತಾ ಒಪ್ಪಿರುವರು.

ASHAPPA Digitally signed by ASHAPPA Date: 2025.10.28 17:28:31 +0530

ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಪ್ರ.ದ.ನ್ಯಾದಂ.ಗಳು, ಬನಹಟ್ಟಿ